D:\mgnrega\Patrika Prakatane BFT 07-10-2017.doc

# ಜಿಲ್ಲಾ ಪಂಚಾಯತ ಕಾರ್ಯಾಲಯ ಧಾರವಾಡ

ನಂ/ಧಾಜಿಪಂ/ಮುಕಾನಿಅ/ಸಿ-1/ಬಿಎಫ್‌ಟಿ/ಪಪ್ರ/2017-18/ ದಿನಾಂಕ:09-10-2017.

ಗೆ,
ಜಿಲ್ಲಾ ವಾರ್ತಾ ಮತ್ತು ಪ್ರಚಾರ ಅಧಿಕಾರಿಗಳು,
ಧಾರವಾಡ.

ಮಾನ್ಯರೆ.

**ವಿಷಯ:**ಸನ್ 2017-18 ನೇ ಸಾಲಿನಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಬಿಎಫ್‌ಟಿ ಹುದ್ದೆಗಳನ್ನು ತಾತ್ಕಾಲಿಕವಾಗಿ ಭರ್ತಿಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸುವ ಕುರಿತು ದಿನಪತ್ರಿಕೆಯಲ್ಲಿ ಪ್ರಕಟಿಸುವ ಕುರಿತು.

**ಉಲ್ಲೇಖ:**ಸರ್ಕಾರದ ಪತ್ರ ಸಂಖ್ಯೆ/ಗ್ರಾಅಪ/515/ಉಖಾಯೋ/2015/ದಿನಾಂಕ :25-09-2017.

* * * * *

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ಧಾರವಾಡ ಜಿಲ್ಲೆಯ ಐದೂ ತಾಲೂಕ ಪಂಚಾಯತನ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯ ಸಮರ್ಪಕ ಅನುಷ್ಠಾನ ಮತ್ತು ಕಾಮಗಾರಿಗಳ ಗುಣಮಟ್ಟವನ್ನು ಕಾಯ್ದುಕೊಳ್ಳುವ ಸಲುವಾಗಿ ತಾಂತ್ರಿಕ ಸಹಾಯಕ ಇಂಜನೀಯರುಗಳಿಗೆ ಸಹಾಯಕರಾಗಿ ಕ್ಷೇತ್ರ ಮಟ್ಟದಲ್ಲಿ ಕರ್ತವ್ಯ ನಿರ್ವಹಿಸಲು ಒಟ್ಟು 10 ಬಿಎಫ್‌ಟಿ ಹುದ್ದೆಗಳನ್ನು ಆಯ್ಕೆ ಮಾಡಬೇಕಾಗಿರುತ್ತದೆ.

**ಅರ್ಹತೆಗಳು :**

1. ಕನಿಷ್ಠ 10ನೇ ತರಗತಿ ಉತ್ತೀರ್ಣರಾಗಿರಬೇಕು.
2. ಸ್ಥಳೀಯ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.
3. ಮಹಿಳೆಯರಿಗೆ ಪ.ಜಾ ಮತ್ತು ಪ.ಪಂ ಅಭ್ಯರ್ಥಿಗಳಿಗೆ ಸಾಕಷ್ಟು ಪ್ರಾಧ್ಯಾನ್ಯತೆ ನೀಡಲಾಗುವುದು.
4. 45 ವರ್ಷಕ್ಕಿಂತ ಕಡಿಮೆ ವಯೋಮಿತಿ ಉಳ್ಳವರಾಗಿರಬೇಕು.
5. ಆಯ್ಕೆಯಾದ ಅಭ್ಯರ್ಥಿಗಳಿಗೆ ಮಾಸಿಕ ವೇತನ ರೂ.10,000/-.
6. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:23.10.2017.
7. ಭರ್ತಿ ಮಾಡಿದ ಅರ್ಜಿಗಳನ್ನು ಜಿಲ್ಲಾ ಪಂಚಾಯತನ MGNREGA ಯೋಜನೆಯ MIS ಶಾಖೆಗೆ ಸಲ್ಲಿಸುವುದು.
8. ದಿನಾಂಕ:26-10-2017 ರಂದು ಬೆಳಿಗ್ಗೆ 10.00 ಘಂಟೆಗೆ ಜಿಲ್ಲಾ ಪಂಚಾಯತ ಕಛೇರಿಯಲ್ಲಿ ಅಭ್ಯರ್ಥಿಗಳ ಮೂಲ ದಾಖಲಾತಿಗಳ ಪರಿಶೀಲನೆ ನಡೆಸಲಾಗುವುದು.
9. ಹೆಚ್ಚಿನ ಮಾಹಿತಿಗಾಗಿ ಗ್ರಾಮ ಪಂಚಾಯತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳನ್ನು ಸಂಪರ್ಕಿಸುವುದು.

ಅರ್ಜಿ ನಮೂನೆಯನ್ನು ಗ್ರಾಮ ಪಂಚಾಯತ ಹಾಗೂ ತಾಲೂಕ ಪಂಚಾಯತಗಳಿಂದ ಪಡೆಯಬಹುದಾಗಿದೆ. ಅಥವಾ ಧಾರವಾಡ ಜಿಲ್ಲಾ ಪಂಚಾಯತನ Website: ವಿಳಾಸ http://zpdharwad.kar.nic.in ನಲ್ಲಿ ಪಡೆಯಬಹುದಾಗಿದೆ. ಸದರಿ ವಿಷಯವನ್ನು ದಿನಪತ್ರಿಕೆಗಳಲ್ಲಿ ಪ್ರಕಟಿಸುವಂತೆ ಕೋರಿದೆ.

ತಮ್ಮ ವಿಶ್ವಾಸಿ,

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತ ಧಾರವಾಡ.

ಕರ್ನಾಟಕ ಸರ್ಕಾರ
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
2ನೇ ಮಹಡಿ, 3ನೇ ಹಂತ, ಕೊಠಡಿ ಸಂಖ್ಯೆ: 219, ಬಹುಮಹಡಿಗಳ ಕಟ್ಟಡ, ಬೆಂಗಳೂರು– 560 001,
ದೂರವಾಣಿ ಸಂಖ್ಯೆ: 080–22372738 ಈ–ಮೇಲ್ : karnregs@gmail.com

ಸಂಖ್ಯೆ:ಗ್ರಾಅಪ 515 ಉಖಾಯೋ 2015 ದಿನಾಂಕ:25–09–2017

ರವರಿಗೆ:
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
(ಬಾಗಲಕೋಟೆ, ಬೆಂಗಳೂರು(ನ), ಚಿಕ್ಕಮಗಳೂರು, ಯಾದಗಿರಿ ಜಿಲ್ಲೆ ಹೊರತು ಪಡಿಸಿ)

ಮಾನ್ಯರೇ,

ವಿಷಯ: 2017–18ನೇ ಸಾಲಿನಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಬಿಎಫ್‌ಟಿ ಅಭ್ಯರ್ಥಿಗಳನ್ನು ಗುರುತಿಸುವ ಕುರಿತು.

*****

Issued
Date 26-9-17
Signature

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಸಮರ್ಪಕ ಅನುಷ್ಠಾನ ಮತ್ತು ಕಾಮಗಾರಿಗಳ ಗುಣಮಟ್ಟವನ್ನು ಕಾಯ್ದುಕೊಳ್ಳುವ ಸಲುವಾಗಿ ತಾಂತ್ರಿಕ ಸಹಾಯಕ ಇಂಜಿನೀಯರುಗಳಿಗೆ ಸಹಾಯಕವಾಗಿ ಕ್ಷೇತ್ರ ಮಟ್ಟದಲ್ಲಿ ಕರ್ತವ್ಯ ನಿರ್ವಹಿಸಲು ಜಿಲ್ಲಾವಾರು ಅನುಬಂಧದಲ್ಲಿ ವಿವರಿಸಿರುವಂತೆ ಒಟ್ಟು 755 ಬಿಎಫ್‌ಟಿಗಳ ಅಭ್ಯರ್ಥಿಗಳ ಆಯ್ಕೆಗೆ ಈ ಹಿಂದೆ ಗುರಿ ನಿಗದಿಪಡಿಸಲಾಗಿತ್ತು. ಸದರಿ ಗುರಿಗೆ ಅನುಗುಣವಾಗಿ ಒಟ್ಟು 678 ಬಿಎಫ್‌ಟಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಕರ್ತವ್ಯಕ್ಕೆ ನಿಯೋಜಿಸಲಾಗಿದೆ.

ಆದುದರಿಂದ, ಬಾಕಿ ಇರುವ 77 ಮತ್ತು ಪ್ರಸಕ್ತ ಸಾಲಿನ 332 ಸೇರಿದಂತೆ ಒಟ್ಟು 409 ಬಿಎಫ್‌ಟಿ ಅಭ್ಯರ್ಥಿಗಳನ್ನು ಇದರೊಂದಿಗೆ ಲಗತ್ತಿಸಿರುವ ಅನುಬಂಧದಲ್ಲಿ ವಿವರಿಸಿರುವಂತೆ ಜಿಲ್ಲಾವಾರು ಗುರಿ ನಿಗದಿಪಡಿಸಿದ್ದು, ಅದರಂತೆ ಒಟ್ಟು 409 ಅಭ್ಯರ್ಥಿಗಳನ್ನು ಗುರುತಿಸಲು ಸೂಚಿಸಿದೆ.

**ಅರ್ಹತೆಗಳು:**

1. ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಸಕ್ರಿಯ (Active worker: Should have worked in the last two years) household/mate/supervisor ಕೆಲಸಗಾರನಾಗಿರಬೇಕು.
2. ಕನಿಷ್ಠ 10ನೇ ತರಗತಿ ಉತ್ತೀರ್ಣರಾಗಿರಬೇಕು.
3. ಸ್ಥಳೀಯ ಅಭ್ಯರ್ಥಿಗಳಿಗೆ ಆದ್ಯತೆ ನೀಡುವುದು.
4. ಮಹಿಳೆಯರಿಗೆ, ಪ.ಜಾ ಮತ್ತು ಪ.ಪಂ ಅಭ್ಯರ್ಥಿಗಳಿಗೆ ಸಾಕಷ್ಟು ಪ್ರಾಧ್ಯಾನ್ಯತೆ ನೀಡುವುದು.
5. 45 ವರ್ಷಕ್ಕಿಂತ ಕಡಿಮೆ ವಯೋಮಿತಿ ಉಳ್ಳವರಾಗಿರಬೇಕು.

**ಬಿಎಫ್‌ಟಿ ಆಯ್ಕೆಯ ಪ್ರಕ್ರಿಯೆಯಲ್ಲಿ ಅನುಸರಿಸಬೇಕಾದ ವಿಧಾನಗಳು:**

1. ಜಿಲ್ಲೆಯಲ್ಲಿ ಹೆಚ್ಚು ಪ್ರಚಲಿತದಲ್ಲಿರುವ ರಾಜ್ಯ ಮಟ್ಟದ ದಿನಪತ್ರಿಕೆಗಳಲ್ಲಿ ಬಿಎಫ್‌ಟಿ ಅಭ್ಯರ್ಥಿಗಳ ಆಯ್ಕೆಗೆ ಜಾಹಿರಾತನ್ನು ಜಿಲ್ಲಾ ಪಂಚಾಯತ್ ವತಿಯಿಂದ ಪ್ರಕಟಿಸುವುದು.
2. ದಿ:03–10–2017ರಿಂದ 23–10–2017ರ ವರೆಗೂ ಅರ್ಜಿ ಸಲ್ಲಿಸಲು ಅಭ್ಯರ್ಥಿಗಳಿಗೆ ಅವಕಾಶ ಮಾಡಿ ಕೊಡುವುದು.
3. ಜಿಲ್ಲಾ ಪಂಚಾಯಿತಿಯ ಉಪ ಕಾರ್ಯದರ್ಶಿ/ಯೋಜನಾ ನಿರ್ದೇಶಕರು ಈ ಪ್ರಕ್ರಿಯೆಯ ಸಂಪೂರ್ಣ ಮೇಲುಸ್ತುವಾರಿ ವಹಿಸುವುದು. (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಇಚ್ಛಿಸಿದಲ್ಲಿ ಇತರೆ ಅಧಿಕಾರಿಗಳನ್ನು ನಿಯೋಜಿಸಬಹುದಾಗಿದೆ)
4. ದಿ:26–10–2017ರಂದೇ ಜಿಲ್ಲಾಪಂಚಾಯತ್ ಮಟ್ಟದಲ್ಲಿ 2–3 ಸರ್ಕಾರಿ ಅಧಿಕಾರಿಗಳ ತಂಡವನ್ನು ರಚಿಸಿಕೊಂಡು ಒಂದೇ ದಿನದಲ್ಲಿ ಅಭ್ಯರ್ಥಿಗಳ ಮೂಲ ದಾಖಲಾತಿಗಳನ್ನು ಪರಿಶೀಲಿಸುವುದು ಮತ್ತು ಪ್ರಸಕ್ತ ಆರ್ಥಿಕ ವರ್ಷದಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಕೆಲಸ ಮಾಡಿರುವ ಮಾನವ ದಿನಗಳ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಅವರೋಹಣ (Descending order) ಕ್ರಮದಲ್ಲಿ ಪಟ್ಟಿ ಮಾಡುವುದು.

ಮು.ತಿ.ನೋ